**ದಿನಾಂಕ: 19.04.2022 ರಂದು ಬೆಳಗ್ಗೆ 11:00 ಗಂಟೆಗೆ ವಾರ್ಡ್ ಸಂಖ್ಯೆ 166 ಕರೀಸಂದ್ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

***ಹಾಜರಿದ್ದ ಅಧಿಕಾರಿಗಳು:-***

1. ಶ್ರೀ. ಪ್ರದೀಪ್ ರಾಥೋಡ್ – ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು.
2. ಶ್ರೀ. ಯತೀಶ್. ಎ.ಜೆ – ಸಹಾಯಕ ಅಭಿಯಂತರರು ಮತ್ತು ಸಂಚಾಲಕರು (ವಾರ್ಡ್ 166 ಕರೀಸಂದ್ರ)
3. ಶ್ರೀ. ರುದ್ರೇಶ್ – ಸಹಾಯಕ ಅಭಿಯಂತರರು (ಬೆಸ್ಕಾಂ)
4. ಶ್ರೀ. ನರಸಿಂಹಲು – ಹಿ.ಆ.ಪ– (ವಾರ್ಡ್ 166 ಕರೀಸಂದ್ರ)
5. ಶ್ರೀ. ಬಾಬು – ಕಿ.ಆ.ಪ (ವಾರ್ಡ್ 166 ಕರೀಸಂದ್ರ)
6. 7ನೇ ಬ್ಲಾಕ್ ಜಯನಗರ ಮತ್ತು ಕಾವೇರಿನಗರ ಸಂಘ ಸಂಸ್ಥೆಯ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು.

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 166 ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಸಮಿತಿ ಸಭೆಯಲ್ಲಿ ರಜತಾದ್ರಿ ಹೋಟೆಲ್ ಸುತ್ತಾಮುತ್ತಾ ಅನಧಿಕೃತವಾಗಿ ಗಾಡಿಗಳ ನಿಲುಗಡೆ ಮಾಡಲಾಗುತ್ತಿರುವ ಬಗ್ಗೆ ಸದಸ್ಯರು ದೂರು ನೀಡಿದರು. ಇದಕ್ಕೆ ನೋಡಲ್ ಅಧಿಕಾರಿಗಳು ವಾಹನ ನಿಲುಗಡೆ ಸಮಸ್ಯೆಯನ್ನು ಸಂಚಾರಿ ಪೋಲೀಸ್ ಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳಲು ಸಂಬಂಧ ಪಟ್ಟ ಇಲಾಖೆಗೆ ಸೂಚಿಸಲಾಯಿತು.

ವಾರ್ಡಿನ ಜಯನಗರ 7ನೇ ಬ್ಲಾಕ್‌ನ 33ನೇ ಅಡ್ಡರಸ್ತೆಯಲ್ಲಿ ಡಾಂಬರೀಕರಣಗೊಂಡ ರಸ್ತೆಯು ಕಳಪೆ ಗುಣಮಟ್ಟದ್ದಾಗಿದೆ ಎಂದು ಸದಸ್ಯರು ದೂರು ನೀಡಿದರು. ಸದರಿ ರಸ್ತೆಯನ್ನು ಸರಿಪಡಿಸಲು ಅಧ್ಯಕ್ಷರು ರವರು ಸಂಬಂಧಪಟ್ಟ ಅಭಿಯಂತರರಿಗೆ ಸೂಚಿಸಲಾಯಿತು.

ವಾರ್ಡ್ ಸಂಖ್ಯೆ 166 ರ 6ನೇ ಮತ್ತು 11ನೇ ಅಡ್ಡರಸ್ತೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಕಳೆದ 3 ವರ್ಷಗಳಿಂದ ಪೈಪ್ ಅಳವಡಿಕೆ ಕಾಮಗಾರಿಯು ನಡೆಯುತ್ತಿದ್ದು, ಇದರಿಂದ ಡಾಂಬರೀಕರಣ ಕಾಮಗಾರಿಯನ್ನು ನಿರ್ವಹಿಸಲು ವಿಳಂಬವಾಗುತ್ತಿದ್ದು, ಪೂರ್ಣರಸ್ತೆಯು ರಸ್ತೆಗುಂಡಿ ಹಾಗೂ ಧೂಳಿನಿಂದ ತುಂಬಿರುತ್ತದೆ ಇದರಿಂದ ಸಾರ್ವಜನಿಕರ ಹಾಗೂ ವಾಹನಗಳ ಸಂಚಾರಕ್ಕೆ ಸಮಸ್ಯೆಯಾಗುತ್ತಿದೆಯೆಂದು ಹಾಗೂ ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ನಿರ್ವಹಿಸುತ್ತಿರುವ ಕಾಮಗಾರಿಯು ಯಾವಾಗ ಮುಕ್ತಾಯಗೊಳ್ಳುವುದೆಂದು ಸದಸ್ಯರು ದೂರನ್ನು ನೀಡಿದರು. ಸದರಿ ಕಾಮಗಾರಿಯನ್ನು ಜರೂರಾಗಿ ನಿರ್ವಹಿಸಿ ಪೂರ್ಣಗೊಳಿಸಲು ಮಾನ್ಯ ಅಧ್ಯಕ್ಷರು ರವರು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರಿಗೆ ಸೂಚಿಸಿದರು.

ವಾರ್ಡ್‌ನಲ್ಲಿ ನಕ್ಷೆಗೆ ವ್ಯತಿರಿಕ್ತವಾಗಿ ನಿರ್ಮಿಸಲಾಗುತ್ತಿರುವ ಕಟ್ಟಡಗಳ ವಿರುದ್ಧ ಕೈಗೊಂಡಿರುವ ಕ್ರಮಗಳ ಬಗ್ಗೆ ಮಾಹಿತಿಗಳನ್ನು ನೀಡಲು ಸದಸ್ಯರು ಕೋರಿದರು. ಸದರಿ ವಾರ್ಡಿನಲ್ಲಿ ನಕ್ಷೆಗೆ ವ್ಯತಿರಿಕ್ತವಾಗಿ ನಿರ್ಮಿಸಲಾಗುತ್ತಿರುವ ಕಟ್ಟಡಗಳ ವಿರುದ್ಧ ಕಟ್ಟಡ ಮಾಲೀಕರಿಗೆ ನೀಡಲಾಗಿರುವ ನೋಟೀಸ್‌ಗಳ ಪ್ರತಿಗಳನ್ನು ಮಾನ್ಯ ಅಧ್ಯಕ್ಷರಿಗೆ ನೀಡಲಾಯಿತು.

6ನೇ ಅಡ್ಡರಸ್ತೆ ಮತ್ತು 2ನೇ ಮುಖ್ಯರಸ್ತೆಯ ರಸ್ತೆ ಬದಿಯ ಆಹಾರ ವ್ಯಾಪಾರಿ ರವರಿಂದ ರಸ್ತೆಯ ಸುತ್ತಾಮುತ್ತಾ ಹಾಗೂ ಮೆಟ್ರೋ ಸ್ಟೇಷನ್ ಹಿಂಭಾಗದ 3ನೇ ಮುಖ್ಯರಸ್ತೆ, 7ನೇ ಬ್ಲಾಕ್‌ನಲ್ಲಿ ಹಾಗೂ 38ನೇ ಅಡ್ಡರಸ್ತೆಯಲ್ಲಿ ಅನಧಿಕೃತವಾಗಿ ವಾಹನ ನಿಲುಗಡೆ ಹಾಗೂ ಸಾರ್ವಜನಿಕ ಸಂಚಾರಕ್ಕೆ ತೊಂದರೆ ಉಂಟಾಗುತ್ತಿದೆ ಎಂದು ಸದಸ್ಯರು ದೂರು ನೀಡಿದರು ಇದಕ್ಕೆ ನೋಡಲ್ ಅಧಿಕಾರಿಗಳು ವಾಹನ ನಿಲುಗಡೆ ಸಮಸ್ಯೆಯನ್ನು ಸಂಚಾರಿ ಪೋಲೀಸ್ ಅಧಿಕಾರಿಗಳಿಗೆ ಹಾಗೂ ಘನತ್ಯಾಜ್ಯ ವಿಲೇವಾರಿ ಸಮಸ್ಯೆಯನ್ನು ಸಂಬಂಧಪಟ್ಟ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಕ್ತ ಕ್ರಮ ಕೈಗೊಂಡು ವರದಿ ನೀಡಲು ಸೂಚಿಸಲಾಯಿತು.

10ನೇ ಅಡ್ಡರಸ್ತೆಯಲ್ಲಿ ಸ್ವತ್ತಿನ ಸಂಖ್ಯೆ 608, ಮುಂಭಾಗದಲ್ಲಿರುವ ಮರವು ಬೀಳುವ ಹಂತದಲ್ಲಿದ್ದು, 33ನೇ ಅಡ್ಡರಸ್ತೆ, ಸ್ವತ್ತಿನ ಸಂಖ್ಯೆ 196, ಮೇಜರ್ ರಂಗನಾಥ್ ರವರ ಮನೆಯ ಮುಂಭಾಗದ 2 ಮರಗಳು ಹಾಗೂ ವಾರ್ಡಿನ ಉದ್ಯಾನವನಗಳಲ್ಲಿ ಬೀಳುವ ಹಂತದಲ್ಲಿರುವ ಒಣ ಮರಗಳಿಂದ ಸಾರ್ವಜನಿಕರಿಗೆ ಹಾನಿ ಉಂಟಾಗುವ ಸಾಧ್ಯತೆ ಇರುವುದರಿಂದ ಸದರಿ ಮರಗಳನ್ನು ತೆರವುಗೊಳಿಸುವಂತೆ ಸದಸ್ಯರು ಕೋರಿದರು. ಇದಕ್ಕೆ ನೋಡಲ್ ಅಧಿಕಾರಿ ರವರು ಅರಣ್ಯ ಇಲಾಖೆ ರವರಿಗೆ ಸದರಿ ಮರಗಳನ್ನು ತೆರವುಗೊಳಿಸುವಂತೆ ಸೂಚಿಸುವುದಾಗಿ ತಿಳಿಸಿದರು.

7ನೇ ಬ್ಲಾಕ್ ಜಯನಗರ ಕೆ.ಆರ್ ರಸ್ತೆಯಲ್ಲಿ ರಸ್ತೆ ಬೀದಿ ದೀಪಗಳ ಕಂಬಗಳನ್ನು ನೆಡಲು ಸುಮಾರು 3 ಅಡಿಗಳವರೆಗೆ ರಸ್ತೆಯನ್ನು ಅಗೆಯಲಾಗಿದ್ದು, ಪ್ರಸ್ತುತ ಬೀದಿ ದೀಪಗಳ ಕಂಬಗಳನ್ನು ನೆಡುವ ಕಾಮಗಾರಿಯು ಇನ್ನೂ ಮುಗಿಯದ ಕಾರಣ ಸಾರ್ವಜನಿಕರು ರಸ್ತೆಯನ್ನು ದಾಟಲು ಹಾಗೂ ಸಂಚರಿಸಲು ಕಷ್ಟವಾಗುತ್ತಿರುವುದರಿಂದ ಸದರಿ ಕಾಮಗಾರಿಯನ್ನು ತುರ್ತಾಗಿ ಪೂರ್ಣಗೊಳಿಸಲು ಕೋರಿದರು. ಸದರಿ ದೂರಿನ ಬಗ್ಗೆ ಮಾನ್ಯ ನೋಡಲ್ ಅಧಿಕಾರಿ ರವರು ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ ಬೆಸ್ಕಾಂ ರವರಿಗೆ ಸೂಚಿಸುವುದಾಗಿ ತಿಳಿಸಿದರು.

ಶಾಸ್ತ್ರೀನಗರದ ಸಿಗ್ನಲ್ ಬಳಿ ಇರುವ ಮಾನ್ಯಹೋಲ್ ರಸ್ತೆಮಟ್ಟದಿಂದ ಕೆಳಗೆ ಇರುವುದರಿಂದ ವಾಹನಗಳ ಸಂಚಾರಕ್ಕೆ ಸಮಸ್ಯೆ ಉಂಟಾಗುತ್ತಿರುವುದರಿಂದ ಸದರಿ ಸಮಸ್ಯೆಗೆ ಕ್ರಮ ಕೈಗೊಳ್ಳಲು ಸದಸ್ಯರು ಕೋರಿದರು. ಮಾನ್ಯ ನೋಡಲ್ ಅಧಿಕಾರಿ ರವರು ಸದರಿ ಕ್ರಮವನ್ನು ತುರ್ತಾಗಿ ಕೈಗೊಳ್ಳಲು ಸಂಬಂಧಪಟ್ಟ ವಿಭಾಗ ರವರಿಗೆ ಸೂಚಿಸುವುದಾಗಿ ತಿಳಿಸಿದರು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಾದ ಶ್ರೀ. ಪ್ರದೀಪ್ ರಾಥೋಡ್ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ 166




